ಕರ್ನಾಟಕ ಸರ್ಕಾರ

# ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯಾದಗಿರಿ

ಕೋಣೆ ಸಂಖ್ಯೆ : ಸಿ-17, ಒಂದನೇ ಮಹಡಿ, ಜಿಲ್ಲಾ ಆಡಳಿತ ಭವನ ಸಂಕೀರ್ಣ, ಚಿತ್ತಾಪೂರ ರಸ್ತೆ, ಯಾದಗಿರಿ-585202

Email_ID : ddwcdyad@gmail.com ಫೋನ್ : 08473-253739

ಸಂಖ್ಯೆ: ಉನಿಯಾ/ಮಮಅಇ/ಮಿಶ/ಜಿಮಸಘ/ಸಿನೇ/2024-25/219 ದಿನಾಂಕ: .09.2024

## -: ಅರ್ಜಿ ಆಹ್ವಾನ ಪ್ರಕಟಣೆ :-

ವಿಷಯ: "ಮಿಷನ್ ಶಕ್ತಿ" ಯೋಜನೆಯ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ (District Hub for Empowerment of Women) ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿ ಖಾಲಿಯಿರುವ ಜಿಲ್ಲಾ ಸಂಯೋಜಕರು (PMMVY - District Coordinator)-01 ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಮಮಇ 219 ಮಮಅ 2023 ಬೆಂಗಳೂರು, ದಿನಾಂಕ:25.10.2023
2. ಮಾನ್ಯ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಂಗಳೂರು ರವರ ಪತ್ರ ಸಂಖ್ಯೆ:ಮಮಅಇ/ಮಕವಿ/ HEW/05/2024-25 ದಿನಾಂಕ:04.09.2024
3. ಮಾನ್ಯ ಜಿಲ್ಲಾಧಿಕಾರಿಗಳು ಯಾದಗಿರಿ ರವರ ಕಡತ ಅನುಮೋದನೆ ಕಂಡಿಕೆ ಸಂಖ್ಯೆ ( ) ದಿನಾಂಕ: /09/2024

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖ (1) ಮತ್ತು (2)ಕ್ಕೆ ಸಂಬಂಧಿಸಿದಂತೆ, ಈ ಮೂಲಕ ಪ್ರಕಟಿಸುವುದೇನೆಂದರೆ, "ಮಿಷನ್ ಶಕ್ತಿ" ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸ್ಥಾಪಿಸಲಾದ ಜಿಲ್ಲಾ ಮಹಿಳಾ ಸಬಲೀಕರಣ ಘಟಕದಡಿ ಬರುವ (District Hub for Empowerment of Women) ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿ ಖಾಲಿಯಿರುವ ಜಿಲ್ಲಾ ಸಂಯೋಜಕರು (PMMVY - District Coordinator)-01 ಹುದ್ದೆಗೆ ಗುತ್ತಿಗೆ ಆಧಾರದಲ್ಲಿ ಈ ಕೆಳಕಾಣಿಸಿದ ತಖ್ತೆಯಲ್ಲಿ ತಿಳಿಸಿರುವಂತೆ ಈ ಹಿಂದೆ ಉತ್ತಮ ಕಾರ್ಯ ನಿರ್ವಹಿಸಿರುವ ಬಗ್ಗೆ ದಾಖಲೆ ಹೊಂದಿರುವ ಹಾಗೂ ಕನಿಷ್ಠ ಉಸ್ತುವಾರಿಯಲ್ಲಿ ಉತ್ತಮ ಕೆಲಸ ನಿರ್ವಹಿಸಬಲ್ಲ, ತರಬೇತಿಗಳನ್ನು ಹಮ್ಮಿಕೊಳ್ಳಲು ಸಾಮರ್ಥ್ಯ/ಕೌಶಲ್ಯ ಹೊಂದಿರುವ, ಗಣಕಯಂತ್ರ ನಿರ್ವಹಣೆಯಲ್ಲಿ ಪರಿಣಿತಿ, ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪರಿಪೂರ್ಣ ಹಿಡಿತವುಳ್ಳ ಅಭ್ಯರ್ಥಿಗಳನ್ನು ವಿದ್ಯಾರ್ಹತೆ, ಗಣಕಯಂತ್ರ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ನೇಮಕಾತಿಗೊಳಿಸಲು ಅರ್ಜಿ ಆಹ್ವಾನಿಸಲಾಗಿದೆ.

**ಹುದ್ದೆಯ ವಿವರ ಹಾಗೂ ಅರ್ಹತೆಗಳು :**

| Name of the Post | Qualification | No of Post Position |
|---|---|---|
| **PMMVY-District Coordinator** | • **Graduate in Social Sciences/Life Sciences /Nutrition/Medicine /Health Management /Social Work /Rural Management**<br><br>**Experience: 3 Year's Working with the Government /non-Government Organizations in related domain.** | 01 |

**ವಿಶೇಷ ಸೂಚನೆಗಳು :**

1. ಸದರಿ ನೇಮಕಾತಿಯು 11 ತಿಂಗಳ ಅವಧಿಯಾಗಿದ್ದು, ಕೆಲಸ ನಿರ್ವಹಣೆಯ ಆಧಾರದ ಮೇರೆಗೆ ಹುದ್ದೆಯನ್ನು ಜಿಲ್ಲಾ ಸಮಿತಿ ಅನುಮೋದನೆ ಮೇರೆಗೆ ಮುಂದಿನ ಅವಧಿಗೆ ಮುಂದುವರೆಸಲಾಗುತ್ತದೆ.
2. ಸದರಿ ಮೇಲಿನ ಹುದ್ದೆಯು ಗುತ್ತಿಗೆ ಸೇವೆ ಆಧಾರದಲ್ಲಿ ಇರುತ್ತದೆ. ಸಿಬ್ಬಂದಿಗಳ ಗೌರವಧನವು ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಅನ್ವಯ ನಿಯಮನುಸಾರ ಪಾವತಿಸಲಾಗುವುದು ಎಂಬ ಷರತ್ತಿಗೆ ಒಳಪಟ್ಟಿರುತ್ತದೆ.
3. ಅಭ್ಯರ್ಥಿ ಹುದ್ದೆಗೆ ಅನುಗುಣವಾಗಿ ಅಂಗೀಕೃತ ಕಾಲೇಜು/ವಿಶ್ವ ವಿದ್ಯಾಲಯಗಳಿಂದ ಶಿಕ್ಷಣ ಪಡೆದಿರಬೇಕು. ಹಾಗೂ ನಿಗದಿಪಡಿಸಿದ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಿದ ಅನುಭವ ಹೊಂದಿರತಕ್ಕದ್ದು.
4. **ನೇಮಕಾತಿ ಮಾನದಂಡ** :ಮೇಲಿನ ಹುದ್ದೆಗೆ ಜಿಲ್ಲಾ ಆಯ್ಕೆ ಸಮಿತಿಯು ನಿಗದಿಪಡಿಸಿದ ಮಾನದಂಡಗಳ ಆಧಾರದ ಮೇಲೆ ಹಾಗೂ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು, ಗಣಕಯಂತ್ರ ಪರೀಕ್ಷೆಯಲ್ಲಿ ಪಡೆದ ಅಂಕಗಳು, ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳು, ಅನುಭವ ಹಾಗೂ ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದಮೇಲೆ ನೇಮಕಾತಿಗೊಳಿಸಲಾಗುವುದು.

2ನೇ ಪುಟಕ್ಕೆ...

5. ಸದರಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕನ್ನಡ ಮತ್ತು ಇಂಗ್ಲೀಷ್ ಜ್ಞಾನ ಅಗತ್ಯವಾಗಿರುತ್ತದೆ.
6. ಸದರಿ ನೇಮಕಾತಿಯನ್ನು ಸರ್ಕಾರದ ನಿರ್ದೇಶನ ಹಾಗೂ ಆದೇಶದಂತೆ ರದ್ದುಪಡಿಸುವ ಅಥವಾ ಅವಧಿಕ್ಕಿಂತ ಕಡಿಮೆ ಮಾಡುವ ಅಧಿಕಾರವನ್ನು ಮಾನ್ಯ ಜಿಲ್ಲಾಧಿಕಾರಿಗಳು ಅಧ್ಯಕ್ಷರು ಹೊಂದಿರುತ್ತಾರೆ.
7. ಅಭ್ಯರ್ಥಿಯ ಆಯ್ಕೆ ಬಗ್ಗೆ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.
8. ತಾತ್ಕಾಲಿಕ ಹುದ್ದೆ ಇರುವುದರಿಂದ ಯಾವುದೇ ಮೀಸಲಾತಿಗಳು ಅನ್ವಯಿಸುವುದಿಲ್ಲ.
9. ಸದರಿ ಮೇಲಿನ ಹುದ್ದೆ ಕ್ಷೇತ್ರ ಮಟ್ಟ(Field work) ಆಗಿರುತ್ತದೆ.

**ಸಲ್ಲಿಸಬೇಕಾದ ದಾಖಲೆಗಳು:**

1. ನಿಗದಿತ ನಮೂನೆಯಲ್ಲಿ ಅರ್ಜಿ
2. ಎಸ್.ಎಸ್.ಎಲ್.ಸಿ ಅಂಕ ಪಟ್ಟಿ
3. ಹುದ್ದೆಗೆ ನಿಗದಿಪಡಿಸಿದ ಹಾಗೂ ವಿದ್ಯಾರ್ಹತೆಯ ಅಂಕಪಟ್ಟಿಗಳು.
4. ಅನುಭವ ಪ್ರಮಾಣ ಪತ್ರಗಳು.
5. ಕನಿಷ್ಠ 06 ತಿಂಗಳು ಕಂಪ್ಯೂಟರ್ ತರಬೇತಿ ಪಡಿದಿರುವ ಬಗ್ಗೆ ಪ್ರಮಾಣ ಪತ್ರ.

ಈ ಮೇಲಿನ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಲು ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಈ ಕಛೇರಿ ಅಥವಾ ಯಾದಗಿರಿ ಜಿಲ್ಲಾ ಎನ್.ಐ.ಸಿ. ವೆಬ್ ಸೈಟ್: **http://yadgir.nic.in** ನಲ್ಲಿ ಪಡೆದು ದಿನಾಂಕ:10.10.2024ರ ವರೆಗೆ ಅಗತ್ಯ ದಾಖಲಾತಿಗಳೊಂದಿಗೆ ಈ ಕಛೇರಿಗೆ ಕಛೇರಿ ಸಮಯದಲ್ಲಿ ಸಂಜೆ:05:30ರ ಒಳಗೆ ಅರ್ಜಿಯನ್ನು ಸಲ್ಲಿಸಲು ಸೂಚಿಸಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯಾದಗಿರಿ ಕೋಣೆ ಸಂಖ್ಯೆ : ಸಿ-17, ಒಂದನೇ ಮಹಡಿ, ಜಿಲ್ಲಾ ಆಡಳಿತ ಭವನ ಸಂಕೀರ್ಣ, ಚಿತ್ತಾಪೂರ ರಸ್ತೆ, ಯಾದಗಿರಿ-585202 ಫೋನ್ ಸಂಖ್ಯೆ : 08473-253739ಗೆ ಸಂಪರ್ಕಿಸ ಬಹುದಾಗಿರುತ್ತದೆಂದು ಈ ಮೂಲಕ ಪ್ರಕಟಣೆ ಹೊರಡಿಸಿದೆ.

**ಉಪ ನಿರ್ದೇಶಕರು**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಯಾದಗಿರಿ

ಪ್ರತಿಯನ್ನು :

1. ಮಾನ್ಯ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರುರವರ ಮಾಹಿತಿಗಾಗಿ
2. ಮಾನ್ಯ ಜಿಲ್ಲಾಧಿಕಾರಿಗಳು, ಯಾದಗಿರಿರವರ ಮಾಹಿತಿಗಾಗಿ
3. ಮಾನ್ಯ ಅಪರ ಜಿಲ್ಲಾಧಿಕಾರಿಗಳು, ಯಾದಗಿರಿರವರಿಗೆ ಸಲ್ಲಿಸುತ್ತಾ ಸದರಿ ಪ್ರಕಟಣೆಯನ್ನು ಜಿಲ್ಲಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಅನುಮತಿ ನೀಡಲು ಕೋರಿದೆ.
4. ಜಿಲ್ಲಾ ಇನ್‌ಫೋರ್ಮಟಿಕ್ಸ್ ಅಧಿಕಾರಿಗಳು, ಎನ್.ಐ.ಸಿ ಕೇಂದ್ರ ಯಾದಗಿರಿರವರಿಗೆ ಸಲ್ಲಿಸುತ್ತಾ ಸದರಿ ಪ್ರಕಟಣೆಯನ್ನು ಜಿಲ್ಲಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
5. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಯಾದಗಿರಿರವರಿಗೆ ಸಲ್ಲಿಸಿಸುತ್ತಾ ಸದರಿ ಪ್ರಕಟಣೆಯನ್ನು ಉಚಿತವಾಗಿ ದಿನಪತ್ರಿಕೆಗಳಲ್ಲಿ ಜಾಹೀರಾತುಗೊಳಿಸಲು ಕೋರಿದೆ.
6. ಕಡತದ ಪ್ರತಿ.

# ಅರ್ಜಿ ನಮೂನೆ

## "ಮಿಷನ್ ಶಕ್ತಿ" ಯೋಜನೆಯಡಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ(DHEW) ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ (PMMVY) ಹುದ್ದೆಯ ಅರ್ಜಿ

ಅರ್ಜಿ ಸಲ್ಲಿಸುವ ಹುದ್ದೆಯ ಹೆಸರು : **PMMVY-District Coordinator**

ಜಿಲ್ಲೆಯ ಹೆಸರು : ಯಾದಗಿರಿ ಜಿಲ್ಲೆ

ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ

| | | |
|---|---|---|
| 01 | ಅಭ್ಯರ್ಥಿಯ ಹೆಸರು | |
| 02 | ತಂದೆಯ ಹೆಸರು | |
| 03 | ತಾಯಿಯ ಹೆಸರು | |
| 04 | ವಿಳಾಸ,ಮೊಬೈಲ್ ಸಂಖ್ಯೆ ಮತ್ತು ಈ-ಮೇಲ್ | ಈ-ಮೇಲ್:<br>ಮೊಬೈಲ್<br>ಜಿ　　ಪಿನ್ ಕೋಡ್ |
| 05 | ಜನ್ಮ ದಿನಾಂಕ (ದಿನಾಂಕ/ತಿಂಗಳು/ವರ್ಷ) | / / |
| 06 | ವೈವಾಹಿಕ ಸ್ಥಿತಿ (ವಿವಾಹಿತ/ಅವಿವಾಹಿತ/ವಿಧವೆ) | |
| 07 | ರಾಷ್ಟ್ರೀಯತೆ | |
| 08 | ಜಾತಿ-ಉಪಜಾತಿ-ವರ್ಗ | |
| 09 | ಲಿಂಗ (ಗಂಡು/ಹೆಣ್ಣು/ಇತರೆ) | |
| 10 | ವಿದ್ಯಾರ್ಹತೆ | |

2ನೇ ಪುಟಕ್ಕೆ

| ಕ್ರ.ಸಂ | ಸ್ನಾತಕೋತ್ತರ/ಪದವಿಯ ಹೆಸರು | ವಿಶ್ವ ವಿದ್ಯಾಲಯ | ಉತ್ತೀರ್ಣರಾದ ವರ್ಷ | ಗರಿಷ್ಠ ಅಂಕಗಳು | ಪಡೆದ ಅಂಕಗಳು | ಶೇಕಡಾ ಅಂಕಗಳು |
|---|---|---|---|---|---|---|
| | | | | | | |
| | | | | | | |
| | | | | | | |
| | | | | | | |
| | | | | | | |
| | | | | | | |

| | | |
|---|---|---|
| 11 | ಕಂಪ್ಯೂಟರ್ ಜ್ಞಾನ (ಪ್ರಮಾಣ ಪತ್ರ ಲಗತ್ತಿಸುವುದು) | |
| 12 | ಈ ಹಿಂದೆ ಸರ್ಕಾರಿ/ಅರೆ ಸರ್ಕಾರಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿದ ವಿವರ | (see below) |

| ಪದನಾಮ | ಯಿಂದ | ವರೆಗೆ | ಸೇವೆ ಸಲ್ಲಿಸಿದ ವಿವರ (ವರ್ಷ/ತಿಂಗಳಲ್ಲಿ) |
|---|---|---|---|
| | | | |
| | | | |
| | | | |
| ಒಟ್ಟು | | | |

| | | |
|---|---|---|
| 13 | ಈ ಅರ್ಜಿಯೊಂದಿಗೆ ಲಗತ್ತಿಸಬೇಕಾದ ಸ್ವಯಂ ದೃಢೀಕೃತ ದಾಖಲಾತಿಗಳು | |
| | 1. ಎಸ್.ಎಸ್.ಎಲ್.ಸಿ.ಅಂಕಪಟ್ಟಿ | |
| | 2. ಸ್ನಾತಕೋತ್ತರ/ಪದವಿಯ ಎಲ್ಲಾ ಸೆಮಿಸ್ಟರ್/ವರ್ಷದ ಅಂಕಪಟ್ಟಿಗಳು | |
| | 3. ಕಂಪ್ಯೂಟರ್ ಕೋರ್ಸ್‌ನ ಪ್ರಮಾಣ ಪತ್ರ | |
| | 4. ಅನುಭವದ ಪ್ರಮಾಣಪತ್ರ | |
| | 5. ವಿಶೇಷ ಅರ್ಹತೆಗೆ ಸಂಬಂಧ ಪಟ್ಟ ದಾಖಲೆಗಳು | |

## ದೃಢೀಕರಣ :

ಈ ಅರ್ಜಿಯಲ್ಲಿ ನಾನು ನೀಡಿರುವ ಎಲ್ಲಾ ಮಾಹಿತಿಗಳು ನನ್ನ ಜ್ಞಾನ ಮತ್ತು ಗ್ರಹಿಕೆಯ ಮಟ್ಟಿಗೆ ಸತ್ಯ, ಸಂಪೂರ್ಣ ಮತ್ತು ಸರಿಯಾದವುಗಳೆಂದು ಆಯ್ಕೆಗೆ ಮೊದಲು ಅಥವಾ ನಂತರ ನಾನು ನೀಡಿರುವ ಮಾಹಿತಿಯು ತಪ್ಪೆಂದು ಅಥವಾ ನಾನು ಅನರ್ಹ ಎಂದು ಕಂಡು ಬಂದರೆ ನನ್ನ ಅರ್ಜಿಯನ್ನು ತಿರಸ್ಕರಿಸಲು ಹಾಗೂ ನನ್ನ ವಿರುದ್ಧ ಕ್ರಮ ಜರುಗಿಸಬಹುದಾಗಿರುತ್ತದೆಂದು ನಾನು ಈ ಮೂಲಕ ಘೋಷಿಸುತ್ತೇನೆ.

ದಿನಾಂಕ :

ಸ್ಥಳ : ಅಭ್ಯರ್ಥಿಯ ಸಹಿ